Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 02/01/2021 ರ
# ಸಭಾ ನಡವಳಿ

ದಿನಾಂಕ: 02/01/2021 ರಂದು ಬೆಳಿಗ್ಗೆ 12.30 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

<u>ಹಾಜರಿದ್ದವರು:</u>

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳಿ | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ-ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್-198, ಹೆಮ್ಮಿಗೆಪುರ |
| 3 | ಶ್ರೀ ಜಿ.ಐ. ಕೆಂಪೇಗೌಡ | ಕಿರಿಯ ಅಭಿಯಂತರರು ಬೆಸ್ಕಾಂ |
| 4 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್. ಎಸ್.ಬಿ. |
| 5 | ಶ್ರೀ ಎ.ಎಸ್. ಕೃಷ್ಣಾನಾಯಕ್ | ಕೆಲಸ ಪರಿವೀಕ್ಷಕರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |



Scanned with CamScanner

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

1. **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು.
2. **ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಸೆಂಚೂರಿ ಅಪಾರ್ಟ್‌ಮೆಂಟ್ ರಸ್ತೆಯಲ್ಲಿ ಹಾಲಿ ಇರುವ ವಿದ್ಯುತ್ ಬೀದಿ ದೀಪಗಳು ಕಾರ್ಯ ನಿರ್ವಹಿಸುತ್ತಿರುವುದಿಲ್ಲವೆಂದು ವಿದ್ಯುತ್ ಬೀದಿ ದೀಪಗಳನ್ನು ಸರಿಪಡಿಸುವಂತೆ ಹಾಗೂ ವಾಜರಹಳ್ಳಿ ಬಾಲಾಜಿ ಬಡಾವಣೆಯ ಪಾರ್ಕ್‌ನಲ್ಲಿರುವ ಸೋಲಾರ್ ಲೈಟ್‌ಗಳನ್ನು ದುರಸ್ಥಿಪಡಿಸಲು ಸಭೆಯಲ್ಲಿ ಕೋರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ವಿದ್ಯುತ್ ಗುತ್ತಿಗೆದಾರರು ಸಭೆಗೆ ಗೈರುಹಾಜರಾಗಿರುವುದು ಕಂಡು ಬಂದಿದ್ದು, ಸದರಿ ಸಮಸ್ಯೆಯನ್ನು ಪರಿಹರಿಸಲು ಸಂಬಂಧಿಸಿದ ವಿದ್ಯುತ್ ವಿಭಾಗದ ಅಭಿಯಂತರರ ಗಮನಕ್ಕೆ ತರಲಾಗುವುದೆಂದು ಸಭೆಯ ಗಮನಕ್ಕೆ ತರಲಾಯಿತು.
3. **ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಗಮ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಕೆಂಪೇಗೌಡ ರಸ್ತೆ ಶ್ರೀ ವೆಂಕಟೇಶ್ ರವರ ಮನೆಯ ಹತ್ತಿರ ವಿದ್ಯುತ್ ಕಂಬವು ಬಾಗಿದ್ದು ಬೀಳುವ ಸ್ಥಿತಿಯಲ್ಲಿ ಇರುವುದನ್ನು ಮತ್ತು ಸಾವನ್‌ದರಬಾರ್ ಆಶ್ರಮದ ಹತ್ತಿರ ಚರ್ಚ್ ಮುಂಭಾಗ ಹಾಗೂ ವಾಜರಹಳ್ಳಿ

Scanned with CamScanner

ವ್ಯಾಪ್ತಿಯಲ್ಲಿ ವಿದ್ಯುತ್ ತಂತಿಗಳ ಕೆಳಗಡೆ ಮರಗಳು ಬೆಳೆದಿದ್ದು ವಿದ್ಯುತ್ ತಂತಿಗೆ ಮರದ ಕೊಂಬೆಗಳು ತಾಗುತ್ತಿದ್ದು, ವಿದ್ಯುತ್ ಶಾಟ್‌ಸರ್ಕ್ಯೂಟ್ ಆಗುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳು ಮಾತನಾಡಿ ಸದರಿ ಕಂಬವನ್ನು ತೆರವುಗೊಳಿಸಿ ಹೊಸದಾಗಿ ವಿದ್ಯುತ್ ಕಂಬವನ್ನು ಅಳವಡಿಸಲಾಗುವುದೆಂದು ಮತ್ತು ವಿದ್ಯುತ್ ತಂತಿಗಳ ಕೆಳಗಡೆ ಬೆಳೆದಿರುವ ಮರದ ಕೊಂಬೆಗಳನ್ನು ಟ್ರಿಮ್ ಮಾಡಲಾಗುವುದೆಂದು ಸಭೆಗೆ ತಿಳಿಸಿದರು.

4. <u>**ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ**</u> :- ವಾರ್ಡ್ ನಂ.198ರಲ್ಲಿ ನಂಜಪ್ಪ ಬಡಾವಣೆಯ ಪಕ್ಕದಲ್ಲಿ ಬರುವ ಭೂಮಿಕಾ ಬಡಾವಣೆಯಲ್ಲಿ ಒಳ ಚರಂಡಿ ಮಾರ್ಗವು ಪದೇಪದೇ ಕಟ್ಟಿಕೊಳ್ಳುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಜಲ ಪರಿವೀಕ್ಷಕರು ಮಾತನಾಡಿ ಜಟ್ಟಿಂಗ್ ಯಂತ್ರದ ಮುಖಾಂತರ ಲೈನ್‌ನ್ನು ದುರಸ್ಥಿಗೊಳಿಸುವುದಾಗಿ ಸಭೆಗೆ ತಿಳಿಸಿದರು.

5. <u>**ಸಂಚಾರಿ ಪೊಲೀಸ್ ಠಾಣೆ, ಕೆಂಗೇರಿ:**</u> – ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಆರ್.ಎಂ.ಸಿ. ರೆಡಿಮಿಕ್ಸ್ ಕಾಂಕ್ರೀಟ್ ವಾಹನಗಳು ಓಡಾಡುತ್ತಿದ್ದು, ಸದರಿ ವಾಹನಗಳು ಕಾಂಕ್ರೀಟ್‌ನ್ನು ಹೆಚ್ಚಿನ ಪರಿಮಾಣದಲ್ಲಿ ತುಂಬಿಕೊಂಡು, ರಸ್ತೆಯಲ್ಲೆಲ್ಲ ಕಾಂಕ್ರೀಟನ್ನು ಬೀಳಿಸಿಕೊಂಡು ಹೋಗುತ್ತಿರುವುದರಿಂದ, ರಸ್ತೆಯು ಹಾಳಾಗಿ ದ್ವಿಚಕ್ರವಾಹನ ಸವಾರರಿಗೆ ಅಪಘಾತವಾಗುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಸಂಚಾರಿ ಪೊಲೀಸ್ ಠಾಣಾಧಿಕಾರಿಗಳಿಗೆ ಕೋರಲಾಗುವುದೆಂದು ಸಭೆಗೆ ತಿಳಿಸಿದರು.

6. <u>**ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ:**</u>- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಕಾನ್‌ಕಾರ್ಡ್ ಬಡಾವಣೆಯಲ್ಲಿ ಹೊಸದಾಗಿ ಬೃಹತ್ ಮಳೆ ನೀರುಗಾಲುವೆಗೆ ತಡೆಗೋಡೆಯನ್ನು ನಿರ್ಮಾಣ ಮಾಡಲು ನೂತನವಾಗಿ ನಿರ್ಮಾಣ ಮಾಡಿದ್ದ ರಸ್ತೆ ಬದಿಯ ಚರಂಡಿಯ ಮೇಲೆ ಟಿಪ್ಪರ್ ವಾಹನಗಳು, ಕಬ್ಬಿಣದ ವಾಹನಗಳನ್ನು ಹತ್ತಿಸಿ ರಸ್ತೆ ಬದಿ ಚರಂಡಿಯನ್ನು ಹಾಳು ಮಾಡಿಲಾಗಿದ್ದು ಸದರಿ ಚರಂಡಿಯನ್ನು ಬೃಹತ್ ನೀರುಗಾಲುವೆ ಇಲಾಖೆಯ ವತಿಯಿಂದ ದುರಸ್ಥಿ ಪಡಿಸಲು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಬೃಹತ್ ನೀರುಗಾಲುವೆ ವಿಭಾಗಕ್ಕೆ ಕೋರಲಾಗುವುದೆಂದು ಸಭೆಗೆ ತಿಳಿಸಿದರು.

7. <u>**ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ:**</u>- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣಮಾಡಲು ಸ್ಥಳವನ್ನು ಗುರುತಿಸಿ ಸಭೆಗೆ ತಿಳಿಸಲು ಹಿಂದಿನ ಸಭೆಯಲ್ಲಿ

Scanned with CamScanner

ತಿಳಿಸಿದ್ದರ ಮೇರೆಗೆ ಮೈಲಸಂದ್ರ ಗೇಟ್, ಬಿ.ಜಿ.ಎಸ್. ಸರ್ಕಲ್, ತಲಘಟ್ಟಪುರ ಕೆರೆಯ ಹತ್ತಿರ ಕಿತ್ತೂರು ರಾಣಿ ಚೆನ್ನಮ್ಮ ಪಾರ್ಕ್ ಹಾಗೂ ಕಾನ್‌ಕಾರ್ಡ್ ಬಡಾವಣೆಯ ಗಣೇಶ ದೇವಸ್ಥಾನದ ಹತ್ತಿರ ಗುರುತಿಸಿ ಮುಂದಿನ ಕ್ರಮಕ್ಕಾಗಿ ಸಭೆಯ ಗಮನಕ್ಕೆ ತರಲಾಯಿತು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

Scanned with CamScanner